## JUNE 14, 2025

## AKASHAVANI - DHARWAD

## Regional News (KANNADA) 12 P.M

ರಾಜ್ಯದಲ್ಲಿ ಅಂಬ್ಯುಲೆನ್ಸ್‌ಗಳನ್ನು ಖಾಸಗಿ ಹಿಡಿತದಿಂದ ಮುಕ್ತಗೊಳಿಸಿ, ಆರೋಗ್ಯ ಇಲಾಖೆಯಿಂದ ನಿರ್ವಹಣೆ ಮಾಡುವ ಪ್ರಸ್ತಾವಕ್ಕೆ ರಾಜ್ಯ ಸರ್ಕಾರ ಅನುಮೋದನೆ ನೀಡಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕ್ರಮದಿಂದಾಗಿ ಆರೋಗ್ಯ ಕವಚ ಸೇವೆಯಲ್ಲಿ ಸಾಕ ್ಟ ಸುಧಾರಣೆಯಾಗುವ ವಿಶ್ವಾಸವಿದ್ದು, ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಸುಮಾರು 250 ಕೋಟಿಯ ್ಟ ಉಳಿತಾಯವಾಗಲಿದೆ ಎಂದರು.

<><><>

ಇಂದು ವಿಶ್ವ ರಕ್ತದಾನಿಗಳ ದಿನ. ಇದರ ಅಂಗವಾಗಿ ರಾಜ್ಯಾದ್ಯಂತ ರಕ್ತ ದಾನದ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ವಿಜಯನಗರ ಜಿಲ್ಲೆ ಹೊಸಪೇಟೆಯ ಆರ್.ಚನ್ನಬಸವ ಅವರು ಆರೋಗ್ಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಕಳೆದ 21 ವರ್ಷಗಳಿಂದ 56 ಬಾರಿ ಹಾಗೂ ಕೋವಿಡ್ ಸಮಯದಲ್ಲಿ ಸಹ ರಕ್ತದಾನ ಮಾಡಿರುವುದು ವಿಶೇಷ. ವಿಶ್ವ ರಕ್ತದಾನ ದಿನಾಚರಣೆಯ ಈ ಸಂದರ್ಭದಲ್ಲಿ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ರೈತರಿಗೆ ಹಾಗೂ ವರ್ತಕರಿಗೆ ವ್ಯಾಪಾರ ವಹಿವಾಟು ಕೈಗೊಳ್ಳಲು, ಅಗತ್ಯವಿರುವ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಅಬೀದ್ ಗದ್ಯಾಳ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಉಡುಪಿ ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಕಚೇರಿ ಸಭಾಂಗಣದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಂಸ್ಥೆಯ ಎ.ಪಿ.ಎಂ.ಸಿ ವರ್ತಕರ ಕುಂದು ಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರೈತರು ತಾವು ಬೆಳೆದ ಉತ್ಪನ್ನಗಳ ಮಾರಾಟ ಚಟುವಟಿಕೆಗಳನ್ನು ಕೈಗೊಳ್ಳಲು ಸರ್ಕಾರ ಕೃಷಿ ಉತ್ಪನ್ನ ಮಾರುಕಟ್ಟೆಯನ್ನು ನಿರ್ಮಿಸಿದೆ. ಮಾರುಕಟ್ಟೆಗೆ ಆಗಮಿಸುವ ರೈತರು ಹಾಗೂ ವರ್ತಕರು ತಮ್ಮ ಮಾರಾಟ ಕಾರ್ಯಗಳನ್ನು ಕೈಗೊಳ್ಳಲು ಅಗತ್ಯವಿರುವ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು ಎಂದರು.

<><><>

ಬಾಗಲಕೋಟ ಜಿಲ್ಲೆಯ ಬಾದಾಮಿ ಹಾಗೂ ಗುಳೇದಗುಡ್ಡ ತಾಲೂಕಿನ ವಿವಿಧ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿ ಸ್ವಚ್ಛತೆಗೆ ಆದ್ಯತೆ ನೀಡುವಂತೆ ಸೂಚಿಸಿದರು. ಬಾದಾಮಿ ತಾಲೂಕಿನ ಮಾಲಗಿ ಗ್ರಾಮದಲ್ಲಿರುವ ಅಂಗನವಾಡಿ ಕಟ್ಟಡ ಕಾಮಗಾರಿ, ಉಗಲವಾಟ ಗ್ರಾಮದ ಬದು ನೀರು ನಿರ್ವಹಣೆ ಕಾಮಗಾರಿ, ಕುಳಗೇರಿ ಕ್ರಾಸ್‌ನಲ್ಲಿ ಎಂ.ಆರ್.ಎಫ್, ಘನತಾಜ್ಯ ನಿರ್ವಹಣೆ ಕಾಮಗಾರಿ ಹಾಗೂ ಗುಳೇದಗುಡ್ಡ ತಾಲೂಕಿನ ತೋಗುಣಸಿ ಗ್ರಾಮದ ನೀರು ಸಂಸ್ಕರಣಾ ಘಟಕದ ಕಾಮಗಾರಿಯನ್ನು ವೀಕ್ಷಿಸಿ, ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

<><><>

ಗದುಗಿನ ಪುಣ್ಯಾಶ್ರಮದ ದಿವಂಗತ ಪಂಡಿತ ಡಾಕ್ಟರ್ ಪುಟ್ಟರಾಜ ಕವಿ ಗವಾಯಿಗಳವರ ಸ್ಮರಣಾರ್ಥ ಗದಗನಲ್ಲಿ ನಿರ್ಮಿಸಲಾಗುತ್ತಿರುವ ಪುಟ್ಟರಾಜ ಸಭಾಭವನಕ್ಕೆ ಕೇಂದ್ರದ ಅನುದಾನದ ಬಿಡುಗಡೆಗೆ ತಾವು ಪ್ರಯತ್ನಿಸುವುದಾಗಿ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಗದಗನಲ್ಲಿ ಗಾನಯೋಗಿ ಶಿವಯೋಗಿ ಪಂಡಿತ ಪಂಚಾಕ್ಷರಿ ಗವಾಯಿಯವರ **81** ನೇ ಮತ್ತು ಪದ್ಮಭೂಷಣ ಡಾಕ್ಟರ್ ಪಂಡಿತ ಪುಟರಾಜ ಕವಿ ಗವಾಯಿಗಳವರ **15** ನೇ ಪುಣ್ಯ ಸ್ಮರಣೋತ್ಸವ ಹಾಗೂ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಗದಗನ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಇಂದು ಸಂಜೆ **6** ಗಂಟೆಗೆ, ಕೀರ್ತನ ಸಮ್ಮೇಳನ ಜರುಗಲಿದೆ.

<><><>

ಸಂಕ್ಷಿಪ್ತ ಸುದ್ದಿಗಳು:

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿಯಲ್ಲಿ ಆಯೋಜಿತ, ಜಿಲ್ಲಾ ಮಟ್ಟದ ಮಾವು, ಹಲಸು ಹಣ್ಣುಗಳ ಪ್ರದರ್ಶನ ಹಾಗೂ ಮಾರಾಟ ಮೇಳ-**2025** ಅನ್ನು ಸಚಿವ ಕೆ.ಎಚ್.ಮುನಿಯಪ್ಪ ಉದ್ಘಾಟಿಸಿದರು.

<><><>

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಚೈಲ್ಡ್ ಫಂಡ್ ಇಂಡಿಯಾ ಸಹಯೋಗದೊಂದಿಗೆ, ಬೆಂಗಳೂರು ವಿಕಾಸಸೌಧದಲ್ಲಿ ಆಯೋಜಿಸಲಾದ ಸಾಮಾಜಿಕ ಜಾಲತಾಣ ಮತ್ತು ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಆಗುತ್ತಿರುವ ದುಷ್ಪರಿಣಾಮದ ಕುರಿತ ಅಧ್ಯಯನ ವರದಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಬಿಡುಗಡೆ ಮಾಡಿದರು.

<><><>

**2025-26** ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಅನುಮೋದನೆ ನೀಡಲಾಗಿದೆ. ಈ ಯೋಜನೆಯಡಿ ಬೆಳೆ ವಿಮಾ ಯೋಜನೆ, ರೈತ ಸಮುದಾಯಕ್ಕೆ ಉಪಯುಕ್ತವಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆಯಲ್ಲಿ ಭಾಗವಹಿಸಿ ಲಾಭ ಪಡೆಯಬಹುದಾಗಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

<><><>

ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ಬಗ್ಗೆ ರೈತರಿಗೆ ಮಾಹಿತಿ ಒದಗಿಸಲು ಹಾಸನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಪ್ರಚಾರ ವಾಹನಕ್ಕೆ ಜಿಲ್ಲಾಧಿಕಾರಿ ಸಿ.ಸತ್ಯಭಾಮ ಚಾಲನೆ ನೀಡಿದರು.

<><><>